# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1131 |
| 2 | ಸದಸ್ಯರ ಹೆಸರು | : | ಶ್ರೀ ಜಗದೇವ್ ಗುತ್ತೇದಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸಬೇಕಾದ ದಿನಾಂಕ | : | 21.08.2025 |
| 4 | ಉತ್ತರಿಸುವ ಸಚಿವರು | : | ಗೃಹ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕಲ್ಯಾಣ ಕರ್ನಾಟಕದಲ್ಲಿ ಪೊಲೀಸ್ ಇಲಾಖೆಯಲ್ಲಿ ವೃಂದವಾರು ಮಂಜೂರಾದ ಹುದ್ದೆಗಳು ಎಷ್ಟು; | ಪ್ರಸ್ತುತ ಪೊಲೀಸ್ ಇಲಾಖೆಯ ಕಲ್ಯಾಣ ಕರ್ನಾಟಕಕ್ಕೆ ಮಂಜೂರಾದ ಹುದ್ದೆಗಳು ಮತ್ತು ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳ ವಿವರವನ್ನು ಈ ಕೆಳಕಂಡಂತೆ ಒದಗಿಸಲಾಗಿದೆ. |
| (ಆ) | ಹಾಲಿ ಕಾರ್ಯನಿರ್ವಹಿಸುತ್ತಿರುವ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳು ಎಷ್ಟು; | (ಕೆಳಗಿನ ಕೋಷ್ಟಕ) |

| ಕ್ರ. ಸಂ | ವೃಂದ | ಮಂಜೂರಾತಿ ಬಲ | ಹಾಲಿ ಬಲ | ರಿಕ್ತಸ್ಥಾನ |
|---|---|---|---|---|
| 1 | ಎ- ಗ್ರೂಪ್ | 14 | 6 | 8 |
| 2 | ಬಿ- ಗ್ರೂಪ್ | 27 | 20 | 7 |
| 3 | ಸಿ- ಗ್ರೂಪ್ | 7165 | 5683 | 1482 |
| 4 | ಡಿ- ಗ್ರೂಪ್ | 275 | 158 | 117 |
| ಒಟ್ಟು | | **7481** | **5867** | **1614** |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ++ | ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ; | ಸರ್ಕಾರವು ಪರಿಶಿಷ್ಟ ಜಾತಿಯ ಒಳಮೀಸಲಾತಿಯ ಸಂಬಂಧ ಹೊರಡಿಸಿರುವ ಸುತ್ತೋಲೆ ಸಂಖ್ಯೆ:ಸಿಆಸುಇ 388 ಸೇನನಿ 2024 ದಿನಾಂಕ:25.11.2024 ರಲ್ಲಿರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಲ್ಲಿ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂಹೊರಡಿಸಬಾರದೆಂದು ನಿರ್ದೇಶಿಸಿರುವುದರಿಂದ ಸದರಿ ಹುದ್ದೆಗಳ ನೇಮಕಾತಿಗೆ ಅಧಿಸೂಚನೆಯನ್ನು ಹೊರಡಿಸುವ ಪ್ರಕ್ರಿಯೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.<br><br>ಸದರಿ ನಿರ್ಬಂಧವನ್ನು ತೆರವುಗೊಳಿಸಿದ ನಂತರ ಪೊಲೀಸ್ ಇಲಾಖೆಯಲ್ಲಿನ ರಿಕ್ತ ಹುದ್ದೆಗಳಾದ ಸಿ ಮತ್ತು ಡಿ ವೃಂದದಲ್ಲಿ ಸರ್ಕಾರದ ಸುತ್ತೋಲೆ ಸಂಖ್ಯೆ: ಆಇ 02 ಬಿಇಎಂ 2021, ದಿನಾಂಕ: 24.11.2021 ರನ್ವಯ ಕಲ್ಯಾಣ ಕರ್ನಾಟಕ ವ್ಯಾಪ್ತಿ ಪ್ರದೇಶದ ಹುದ್ದೆಗಳಲ್ಲಿ ವೃಂದಬಲದ ಶೇಕಡಾ 80 ರಷ್ಟು ಹುದ್ದೆಗಳಿಗೆ ಹಾಗೂ ಇನ್ನುಳಿದ ಶೇಕಡಾ 20 ರಷ್ಟು ಹುದ್ದೆಗಳನ್ನು ಆರ್ಥಿಕ ಇಲಾಖೆಯ ಅನುಮತಿ ದೊರೆತ ನಂತರ ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗುವುದು |
| (ಈ) | ಪೊಲೀಸ್ ಇಲಾಖೆಯಲ್ಲಿ ಹುದ್ದೆಗಳು ಖಾಲಿ ಇದ್ದರೆ ಕಾನೂನು ಸುವ್ಯವಸ್ಥೆಗೆ ತೊಂದರೆಯಾಗುವುದಿಲ್ಲವೇ? | ಹಾಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಯ ಕಾನೂನು ಸುವ್ಯವಸ್ಥೆಗೆ ತೊಂದರೆಯಾಗದಂತೆ ಸಮರ್ಪಕವಾಗಿ ಬಳಸಿಕೊಳ್ಳಲಾಗುತ್ತಿದೆ. ಅಲ್ಲದೇ ಖಾಲಿ ಇರುವ ಸಿಪಿಸಿ ಹುದ್ದೆಗಳ ಎದುರಾಗಿ ಗೃಹರಕ್ಷಕ ಸಿಬ್ಬಂದಿಗಳನ್ನು ನಿಯೋಜಿಸಿಕೊಂಡು ಕಾನೂನು ಸುವ್ಯವಸ್ಥೆಗೆ ತೊಂದರೆಯಾಗದಂತೆ ಕರ್ತವ್ಯ ನಿರ್ವಹಿಸಲಾಗುತ್ತಿದೆ. |

ಸಂಖ್ಯೆ: ಒಇ 300ಪಿಇಜಿ 2025

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು